# ಕರ್ನಾಟಕ ಸರ್ಕಾರದ ನಡವಳಿ

ವಿಷಯ: ಚಿತ್ರದುರ್ಗ ಜಿಲ್ಲೆ ಹಿರಿಯೂರು ತಾಲ್ಲೂಕಿನ ಯರಬಳ್ಳಿ ಗ್ರಾಮ ಪಂಚಾಯಿತಿಯಲ್ಲಿ ನಿರ್ಮಲ ಭಾರತ ಅಭಿಯಾನ ಕಾರ್ಯಕ್ರಮದಡಿ ನಡೆದಿರುವ ಅವ್ಯವಹಾರಗಳಲ್ಲಿ ಭಾಗಿಯಾಗಿರುವ ಶ್ರೀ ಜಿ. ಆರ್. ರಮೇಶ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಮತ್ತು ಶ್ರೀ ಡಿ.ಕೆ. ಸುರೇಶ್, ದ್ವಿತೀಯ ದರ್ಜೆ ಸಹಾಯಕ, ಇವರ ಅಮಾನತ್ತನ್ನು ತೆರವುಗೊಳಿಸಿ ಸೇವೆಗೆ ಪುನರ್ ಸ್ಥಾಪಿಸುವ ಬಗ್ಗೆ

ಓದಲಾಗಿದೆ: 1) ಸಕಾರದ ಆದೇಶ ಸಂಖ್ಯೆ: ಗ್ರಾಅಪ 226 ವಿಸೇಬಿ 2013 ದಿ: 28-12-2013 ಮತ್ತು ತಿದ್ದೋಲೆ ದಿ:15-2-2014

2) ಕೆಎಟಿ ಅರ್ಜಿ ಸಂಖ್ಯೆ: 292 ಮತ್ತು 367/2014ರಲ್ಲಿ ದಿನಾಂಕ: 12-2-2014 ರ ಆದೇಶ

3) ಶ್ರೀ ಜಿ. ಆರ್. ರಮೇಶ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರ ಮನವಿ ದಿ:17-2-2014.

4) ಶ್ರೀ ಡಿ. ಕೆ. ಸುರೇಶ್, ದ್ವಿತೀಯ ದರ್ಜೆ ಸಹಾಯಕ ಇವರ ಮನವಿ ದಿನಾಂಕ:14-02-2014.

------

ಪ್ರಸ್ತಾವನೆ:

ಚಿತ್ರದುರ್ಗ ಜಿಲ್ಲೆ ಹಿರಿಯೂರು ತಾಲ್ಲೂಕಿನ ಯರಬಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಡಿ ನಿರ್ಮಲ ಭಾರತ ಅಭಿಯಾನದ ಅನುಷ್ಠಾನದಲ್ಲಿ ಅವ್ಯವಹಾರ ನಡೆದಿದೆ ಎಂಬುದರ ಕುರಿತು ಶ್ರೀ ಜಗದೀಶ್ ಬಿನ್ ಕಂಬಣ್ಣ, ಕಂದಿಗೆರೆ ಗ್ರಾಮ, ಹಿರಿಯೂರು ತಾಲ್ಲೂಕು ಇವರು ಸಲ್ಲಿಸಿದ್ದ ದೂರಿಗೆ ಸಂಬಂಧಿಸಿದಂತೆ ಪರಿಶೀಲಿಸಿ ವರದಿ ನೀಡಲು ಸರ್ಕಾರವು ನಿಯೋಜಿಸಿದ ತಂಡವು ಮೇಲ್ಕಂಡ ಗ್ರಾಮ ಪಂಚಾಯಿತಿಗೆ ಭೇಟಿ ನೀಡಿ ತನಿಖೆ ನಡೆಸಿ ಸಲ್ಲಿಸಿದ್ದ ಪರಿಶೀಲನಾ ವರದಿಯ ಅನುಸಾರ ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಸರ್ಕಾರದ ಆದೇಶಗಳಲ್ಲಿ ಶ್ರೀ ಜಿ. ಆರ್. ರಮೇಶ್ ಅಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಹಿರಿಯೂರು ಮತ್ತು ಶ್ರೀ ಡಿ. ಕೆ. ಸುರೇಶ್, ಅಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಯರಬಳ್ಳಿ ಗ್ರಾಮ ಪಂಚಾಯತಿ, ಹಿರಿಯೂರು ತಾಲ್ಲೂಕು ಇವರುಗಳ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ ಇಲಾಖಾ ವಿಚಾರಣೆಯನ್ನು ಬಾಕಿ ಇಟ್ಟು ಸೇವೆಯಿಂದ ಅಮಾನತ್ತು ಪಡಿಸಲಾಗಿತ್ತು.

ಆರೋಪಿತ ಅಧಿಕಾರಿ/ನೌಕರರಾದ ಶ್ರೀ ಜಿ. ಆರ್. ರಮೇಶ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಮತ್ತು ಶ್ರೀ ಡಿ. ಕೆ. ಸುರೇಶ್, ದ್ವಿತೀಯ ದರ್ಜೆ ಸಹಾಯಕ, ಇವರುಗಳು ದಿನಾಂಕ: 28-12-2013 ರ ಅಮಾನತ್ತಿನ ಆದೇಶವನ್ನು ಪ್ರಶ್ನಿಸಿ ಮಾನ್ಯ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯಲ್ಲಿ ಅರ್ಜಿ ಸಂಖ್ಯೆ: 292 ಮತ್ತು 367/2014 ನ್ನು ಸಲ್ಲಿಸಿದ್ದು. ಮಾನ್ಯ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯು ಈ ಅರ್ಜಿಗಳನ್ನು ದಿನಾಂಕ: 12-2-2014 ರಂದು ಇತ್ಯರ್ಥಪಡಿಸಿದ್ದು ಆದೇಶದ ಕಂಡಿಕೆ 6 ಮತ್ತು 7 ಕೆಳಕಂಡಂತಿದೆ.

`` In view of the above, the impugned order dated 28/12/2013 is liable to be quashed reserving liberty to the respondent to re-examine the matter with reference to the factual aspects and to take further action against the concerned, including the applicants if they are also responsible for the lapses.

" In the result, these applications are allowed. Order No. GraAaPa 226 ViSeBi 2013 dated 28/12/2013 passed by the respondent by

which the applicants are placed under suspension is quashed reserving liberty to the respondent to take appropriate action in the matter in accordance with rules.''

ಮಾನ್ಯ ಕೆಎಟಿ ಯ ದಿನಾಂಕ: 12-02-2014 ರ ಆದೇಶವನ್ನು ಉಲ್ಲೇಖಿಸಿ ಅರ್ಜಿದಾರರಾದ ಶ್ರೀ ಜಿ. ಆರ್. ರಮೇಶ್ ಮತ್ತು ಶ್ರೀ ಡಿ. ಕೆ. ಸುರೇಶ್ ಇವರು ಮೇಲೆ ಓದಲಾದ (3) ಮತ್ತು (4) ರ ಮನವಿಯಲ್ಲಿ ಅವರುಗಳನ್ನು ಸೇವೆಗೆ ಪುನರ್- ಸ್ಥಾಪಿಸಲು ಮತ್ತು ಅಮಾನತ್ತಿನ ಪೂರ್ವದಲ್ಲಿ ಕಾರ್ಯನಿರ್ವಹಿಸುತ್ತಿದ್ದ ಹುದ್ದೆಗೆ ಸ್ಥಳ ನಿಯುಕ್ತಿಗೊಳಿಸಲು ಕೋರಿರುತ್ತಾರೆ.

ಹಿರಿಯೂರು ತಾಲ್ಲೂಕು ಪಂಚಾಯತಿ ವ್ಯಾಪ್ತಿಯ ಯರಬಳ್ಳಿ ಗ್ರಾಮ ಪಂಚಾಯತಿಯಲ್ಲಿ 2005 ರಿಂದ 2013 ರ ವರೆಗೆ ನಿರ್ಮಲ ಭಾರತ ಅಭಿಯಾನ ಯೋಜನೆ ಅನುಷ್ಠಾನದಲ್ಲಿ ಮೇಲ್ಕಂಡ ಅಧಿಕಾರಿ/ನೌಕರರಲ್ಲದೆ ಇನ್ನೂ ಅನೇಕ ಅಧಿಕಾರಿ/ನೌಕರರು ಕರ್ತವ್ಯ ನಿರ್ವಹಿಸಿರುವುದರಿಂದ ಈ ಹಿಂದೆ ತಪಾಸಣೆ ನಡೆಸಿದ ತನಿಖಾ ತಂಡ ಈ ಪ್ರಕರಣದಲ್ಲಿ ಭಾಗಿಯಾಗಿದ್ದ/ಜವಾಬ್ದಾರರಾಗಿದ್ದ ಗ್ರಾಮ ಪಂಚಾಯತಿ ಅಧ್ಯಕ್ಷರು / ಕಾರ್ಯನಿರ್ವಾಹಕ ಅಧಿಕಾರಿ ಗಳ ಹೆಸರುಗಳನ್ನು ಮತ್ತು ಸಂಬಂಧಪಟ್ಟ ಪಂಚಾಯತಿ ಅಭಿವೃದ್ಧಿ ಅಧಿಕಾರಿ /ಗ್ರಾಮ ಪಂಚಾಯತಿ ಕಾರ್ಯದರ್ಶಿಗಳ ಹೆಸರುಗಳನ್ನು ನಿಖರವಾಗಿ ಗುರುತಿಸದೇ ಇರುವ ಕಾರಣ ಈ ಬಗ್ಗೆ ಹೊಸದಾಗಿ ತನಿಖೆ ಮಾಡಲು ನೂತನ ತಂಡವನ್ನು ರಚಿಸಿ ಪ್ರತ್ಯೇಕವಾಗಿ ಆದೇಶ ಹೊರಡಿಸಲಾಗಿದೆ. ಆದ್ದರಿಂದ ಈ ಆರೋಪಿತ ಅಧಿಕಾರಿ/ನೌಕರರ ವಿರುದ್ಧ ಗಂಭೀರ ಸ್ವರೂಪದ ಆರೋಪಗಳು ಇರುವುದರಿಂದ ಅವರುಗಳನ್ನು ಪ್ರಕರಣ ನಡೆದ ಸ್ಥಳದಲ್ಲೇ ಮುಂದುವರೆಸುವುದು ಸೂಕ್ತವಾಗುವುದಿಲ್ಲವೆಂದು ಪರಿಗಣಿಸಿ ಶ್ರೀ ಜಿ. ಆರ್. ರಮೇಶ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರ ಸೇವೆಯನ್ನು ಅವರ ಮಾತೃ ಇಲಾಖೆಯಾದ ಲೋಕೋಪಯೋಗಿ ಇಲಾಖೆಗೆ ಹಿಂದಿರುಗಿಸಲು ಮತ್ತು ಶ್ರೀ ಡಿ. ಕೆ. ಸುರೇಶ್, ದ್ವಿದಸ ಇವರನ್ನು ಹಿರಿಯೂರು ಹಾಗೂ ಮೊಳಕಾಲ್ಮೂರು ತಾಲ್ಲೂಕನ್ನು ಹೊರತುಪಡಿಸಿ ಬೇರೆ ತಾಲ್ಲೂಕಿಗೆ ನೇಮಿಸಲು ಸರ್ಕಾರವು ತೀರ್ಮಾನಿಸಿ ಈ ಕೆಳಕಂಡಂತೆ ಆದೇಶಿಸಿದೆ.

<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 226 ವಿಸೇಬಿ 2013 ಬೆಂಗಳೂರು ದಿನಾಂಕ:04-03-2014.</u>

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ ಹಾಗೂ ಈ ಪ್ರಕರಣಕ್ಕೆ ಸಂಬಂಧಿಸಿದಂತೆ ನೂತನವಾಗಿ ರಚಿಸಲಾಗಿರುವ ತನಿಖಾ ತಂಡ ನೀಡುವ ವರದಿಯ ಮೇಲೆ ಸರ್ಕಾರವು ತೆಗೆದುಕೊಳ್ಳುವ ತೀರ್ಮಾನಕ್ಕೆ ಒಳಪಟ್ಟು ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 226 ವಿಸೇಬಿ 2013 ದಿನಾಂಕ: 28-02-2013 ರ ಆದೇಶದಲ್ಲಿ ಅಮಾನತ್ತಿನಲ್ಲಿರಿಸಲಾಗಿದ್ದ ಈ ಕೆಳಕಂಡ ಅಧಿಕಾರಿ/ನೌಕರರುಗಳಾದ :-

1) ಶ್ರೀ ಜಿ.ಆರ್.ರಮೇಶ್ ಅಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ ಹಿರಿಯೂರು (ಅಮಾನತ್ತಿನ ಸಂದರ್ಭದಲ್ಲಿ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹಿರಿಯೂರು) ಇವರ ಅಮಾನತ್ತನ್ನು ಈ ಮೂಲಕ ತೆರವುಗೊಳಿಸಿ ಸದರಿಯವರ ಸೇವೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ಅವರ ಮಾತೃ ಇಲಾಖೆಯಾದ ಲೋಕೋಪಯೋಗಿ ಇಲಾಖೆಗೆ ಹಿಂದಿರುಗಿಸಿದೆ.

2) ಶ್ರೀ -.ಸುರೇಶ್, ಅಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಯರಬಳ್ಳಿ ಗ್ರಾಮ ಪಂಚಾಯತಿ, ಹಿರಿಯೂರು ತಾಲ್ಲೂಕು. (ಅಮಾನತ್ತಿನ ಸಂದರ್ಭದಲ್ಲಿ ದ್ವಿತೀಯ ದರ್ಜೆ ಸಹಾಯಕ ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಮೊಳಕಾಲ್ಮೂರು)

ಇವರ ಅಮಾನತ್ತನ್ನು ಈ ಮೂಲಕ ತೆರವುಗೊಳಿಸಿದೆ. ಹಾಗೂ ಇವರನ್ನು ಹಿರಿಯೂರು ಮತ್ತು ಮೊಳಕಾಲ್ಮೂರು ತಾಲ್ಲೂಕನ್ನು ಹೊರತುಪಡಿಸಿ ಬೇರೆ ತಾಲ್ಲೂಕಿಗೆ ಸ್ಥಳ ನಿಯುಕ್ತಿಗೊಳಿಸಲು ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಇವರಿಗೆ ನಿರ್ದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಚಂದ್ರಶೇಖರ್),
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ, ಬೆಂಗಳೂರು.
3. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಚಿತ್ರದುರ್ಗ.
5. ನಿರ್ದೇಶಕರು, ಕರ್ನಾಟಕ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಸಂಸ್ಥೆ , ಹಾಗೂ ಪದನಿಮಿತ್ತ ಸರ್ಕಾರದ ಅಪರ ಕಾರ್ಯದರ್ಶಿ, ಗ್ರಾಅಪಂ. ರಾಜ್ ಇಲಾಖೆ, ಬೆಂಗಳೂರು.
6. ಸರ್ಕಾರದ ಅಧೀನ ಕಾರ್ಯದರ್ಶಿ ಲೋಕೋಪಯೋಗಿ ಇಲಾಖೆ, ವಿಕಾಸ ಸೌಧ,ಬೆಂಗಳೂರು.
7. ಸಂಬಂಧಿಸಿದ ಅಧಿಕಾರಿ/ನೌಕರರಿಗೆ (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಚಿತ್ರದುರ್ಗ ಇವರ ಮುಖಾಂತರ)

ಪ್ರತಿಯನ್ನು:

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಕಾರ್ಯದರ್ಶಿ(ಪಂ.ರಾಜ್)/ಅಪರ ಕಾರ್ಯದರ್ಶಿ (ಆಡಳಿತ), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಇವರ ಆಪ್ತ ಶಾಖೆಗೆ.
3. ವಿಶೇಷಾಧಿಕಾರಿ, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
4. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.